Akashvani : Bengaluru
National Bulletin In Kannada
16.09.2025 : 1.10 pm
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

16.09.2025 : 1.10hrs

*******

ಮುಖ್ಯಾಂಶಗಳು

೧. ಉತ್ತರಾಖಂಡದಲ್ಲಿ ವರ್ಷಧಾರೆ; ಜನಜೀವನ ಬಾಧಿತ; ಕೇಂದ್ರದಿಂದ ಎಲ್ಲಾ ನೆರವಿನ ಭರವಸೆ

೨. ನ್ಯೂಯಾರ್ಕ್‌ನಲ್ಲಿ ಭಾರತ-ಅಮೆರಿಕಾ ನಡುವಿನ ವ್ಯಾಪಾರ ಮಾತುಕತೆ ಪುನರಾರಂಭ

೩. ನವದೆಹಲಿಯಲ್ಲಿ ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ

೪. ಸ್ಪೀಡ್ ಸ್ಕೇಟಿಂಗ್ ವಿಶ್ವ ಚ್ಯಾಂಪಿಯನ್‌ಶಿಪ್‌ನಲ್ಲಿ ಚಿನ್ನ ಗೆದ್ದ ಆನಂದ್‌ಕುಮಾರ್ ವೆಲ್‌ಕುಮಾರ್ ಅಭಿನಂದಿಸಿದ ಪ್ರಧಾನಿ

**************

ಉತ್ತರಾಖಂಡದಲ್ಲಿ, ಡೆಹ್ರಾಡೂನ್‌ನ ಸಹಸ್ರಧಾರಾ ಪ್ರದೇಶದಲ್ಲಿ ತಡರಾತ್ರಿ ಸುರಿದ ಧಾರಾಕಾರ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಕರ್ಲಿಗಾರ್ಡ್ ಪ್ರದೇಶದಲ್ಲಿ ರಸ್ತೆಗಳು ಹಾನಿಗೊಳಗಾಗಿದ್ದು, ಪ್ರಮುಖ ಮಾರುಕಟ್ಟೆಯಲ್ಲಿ ಎರಡರಿಂದ ಮೂರು ಹೋಟೆಲ್‌ಗಳು ಮತ್ತು ಸುಮಾರು ಏಳರಿಂದ ಎಂಟು ಅಂಗಡಿಗಳು ಹಾನಿಗೊಳಗಾಗಿವೆ. ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳು ನಡೆಯುತ್ತಿದ್ದು, ಸ್ಥಳೀಯ ಆಡಳಿತ ಸುಮಾರು ೧೦೦ ಜನರನ್ನು ಸುರಕ್ಷಿತವಾಗಿ ಸ್ಥಳಾಂತರಿಸಿದೆ. ನಿನ್ನೆ ಸಂಜೆಯಿಂದ ನಗರದ ಹಲವಾರು ಭಾಗಗಳಲ್ಲಿ ನಿರಂತರ ಮಳೆಯಾಗುತ್ತಿದೆ. ಡೆಹ್ರಾಡೂನ್ ಮತ್ತು ರಾಜ್ಯದ ಇತರ ಭಾಗಗಳಲ್ಲಿ ಮಧ್ಯಮದಿಂದ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದ್ದು, ಹವಾಮಾನ ಇಲಾಖೆ ಎಲ್ಲೋ ಅಲರ್ಟ್ ನೀಡಿದೆ. ಮಳೆ ಎಚ್ಚರಿಕೆಯನ್ನು ಗಮನದಲ್ಲಿಟ್ಟುಕೊಂಡು, ಡೆಹ್ರಾಡೂನ್ ಮತ್ತು ನೈನಿತಾಲ್ ಜಿಲ್ಲೆಗಳಲ್ಲಿರುವ

ಎಲ್ಲಾ ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳಿಗೆ ಇಂದು ರಜೆ ಘೋಷಿಸಲಾಗಿದೆ. ಉತ್ತರಾಖಂಡದಲ್ಲಿ ಭಾರೀ ಮಳೆಯಿಂದ ಉಂಟಾಗಿರುವ ಪರಿಸ್ಥಿತಿ ಕುರಿತು ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರು ಇಂದು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ ಮಾಹಿತಿ ಪಡೆದರು. ಈ ವೇಳೆ ಪ್ರಧಾನಿ ಮತ್ತು ಗೃಹ ಸಚಿವರು ರಾಜ್ಯಕ್ಕೆ ಸಾಧ್ಯವಿರುವ ಎಲ್ಲಾ ಸಹಾಯವನ್ನು ಒದಗಿಸುವ ಮತ್ತು ಈ ವಿಪತ್ತಿನ ಸಮಯದಲ್ಲಿ ಕೇಂದ್ರ ಸರ್ಕಾರ ರಾಜ್ಯದೊಂದಿಗೆ ದೃಢವಾಗಿ ನಿಲ್ಲುತ್ತದೆ ಎಂಬ ಭರವಸೆ ನೀಡಿದ್ದಾರೆ. ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಪ್ರಧಾನಿ ಮತ್ತು ಗೃಹ ಸಚಿವರಿಗೆ ಕೃತಜ್ಞತೆ ಸಲ್ಲಿಸಿದ್ದು, ಅವರ ಮಾರ್ಗದರ್ಶನ ಮತ್ತು ಬೆಂಬಲದೊಂದಿಗೆ ರಾಜ್ಯದಲ್ಲಿ ಪರಿಹಾರ ಕಾರ್ಯಾಚರಣೆಗಳನ್ನು ಹೆಚ್ಚು ವೇಗವಾಗಿ ನಡೆಸಲಾಗುವುದು. ಪೀಡಿತ ಪ್ರದೇಶಗಳಲ್ಲಿ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ಯುದ್ಧೋಪಾದಿಯಲ್ಲಿ ನಡೆಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

**************

ಭಾರತ ಅಮೆರಿಕಾ ನಡುವಿನ ತೆರಿಗೆ ಬಿಕ್ಕಟ್ಟಿನ  ಕುರಿತು ಹೊಸ ಭರವಸೆ ಮೂಡಿದೆ. ನ್ಯೂಯಾರ್ಕ್‌ನಲ್ಲಿ ಇಂದು ಉಭಯ ರಾಷ್ಟ್ರಗಳ ನಡುವೆ ವ್ಯಾಪಾರ ಮಾತುಕತೆಗಳು ಪುನಾರಾರಂಭಗೊಂಡಿವೆ. ಹಲವಾರು ಹಂತಗಳಲ್ಲಿ ಉಭಯ ರಾಷ್ಟ್ರಗಳ ನಡುವೆ ವ್ಯಾಪಾರ ಚರ್ಚೆಗಳು ನಡೆಯಲಿದೆ. ಭಾರತದ ನೇತೃತ್ವವನ್ನು ವಾಣಿಜ್ಯ ಇಲಾಖೆಯ ವಿಶೇಷ ಕಾರ್ಯದರ್ಶಿ ರಾಜೇಶ್ ಅಗರ್‌ವಾಲ್ ವಹಿಸಿದ್ದಾರೆ. ಅಮೆರಿಕಾದ ಪ್ರತಿನಿಧಿ ಬ್ರೆಂಡನ್ ಲಿಂಚ್ ಅವರೊಂದಿಗಿನ ಮಾತುಕತೆಯ ಬಳಿಕ ಮುಂದಿನ ಕ್ರಮದ ಕುರಿತಂತೆ ನಿರ್ಧರಿಸಲಾಗುವುದು ಎಂದು ವಾಣಿಜ್ಯ ಸಚಿವಾಲಯ ತಿಳಿಸಿದೆ. ಜಾಗತಿಕ ಅನಿಶ್ಚಿತತೆಗಳು ಮತ್ತು ವ್ಯಾಪಾರ ನೀತಿ ಅನಿಶ್ಚಿತತೆಗಳ ಹೊರತಾಗಿಯೂ, ಭಾರತದ ರಫ್ತುದಾರರು ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ.

**************

ಮಾರಿಷಸ್ ಪ್ರಧಾನಿ ಡಾ. ನವೀನ್‌ಚಂದ್ರ ರಾಮಗೂಲಂ ಅವರ ೮ ದಿನಗಳ ಭಾರತ ಭೇಟಿ ಇಂದು ಸಂಪನ್ನಗೊಳ್ಳಲಿದೆ. ಆಂಧ್ರಪ್ರದೇಶದ ತಿರುಪತಿಗೆ ಭೇಟಿ ನೀಡಿದ ನಂತರ ಅವರು ನಿನ್ನೆ

ನವದೆಹಲಿಗೆ ಆಗಮಿಸಿದರು. ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ರಾಮಗೂಲಂ ಅವರನ್ನು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು. ಮಾರಿಷಸ್ ಪ್ರಧಾನಿಯವರು ಇಂದು ನವದೆಹಲಿಯಲ್ಲಿ ರಾಜ್‌ಘಾಟ್ ಮತ್ತು ಸದೈವ್ ಅಟಲ್‌ಗೆ ಭೇಟಿ ನೀಡಿ ರಾಷ್ಟ್ರಪಿತ ಮಹಾತ್ಮ ಗಾಂಧಿ ಮತ್ತು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಸಮಾಧಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ಅವರು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ನಂತರ, ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ ಬಳಿಕ ಹೊಸ ಸಂಸತ್ ಭವನಕ್ಕೂ ಭೇಟಿ ನೀಡಲಿದ್ದಾರೆ. ಇದು ಅವರ ಪ್ರಸ್ತುತ ಅವಧಿಯಲ್ಲಿ ಭಾರತಕ್ಕೆ ಅವರ ಮೊದಲ ದ್ವಿಪಕ್ಷೀಯ ಭೇಟಿಯಾಗಿದೆ. ಡಾ. ರಾಮಗೂಲಂ ಅವರು ಈ ಹಿಂದೆ ೨೦೧೪ ರ ಮೇ ತಿಂಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲು ಭಾರತಕ್ಕೆ ಭೇಟಿ ನೀಡಿದ್ದರು.

**************

ಕೇಂದ್ರ ಗೃಹ ಸಚಿವ ಅಮಿತ್ ಶಾ ನವದೆಹಲಿಯಲ್ಲಿಂದು ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ ಎಎನ್‌ಟಿಎಫ್ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಸ್ಥರ ಎರಡನೇ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿದರು. ಮಾದಕ ದ್ರವ್ಯ ಮುಕ್ತ ಭಾರತಕ್ಕೆ ಪ್ರಧಾನಿ ನರೇಂದ್ರ ಮೋದಿಯವರ ಬದ್ಧತೆಯನ್ನು ಬಲಪಡಿಸಲು ಮತ್ತು ಈ ಗುರಿ ಸಾಧಿಸಲು ಮಾರ್ಗಸೂಚಿಯನ್ನು ರೂಪಿಸಲು ಈ ಸಮ್ಮೇಳನ ಒಂದು ಕಾರ್ಯತಂತ್ರದ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ. ಮಾದಕ ದ್ರವ್ಯಗಳನ್ನು ನಾಶಪಡಿಸುವ ವಿಶೇಷ ಅಭಿಯಾನದ ಉದ್ಘಾಟನೆಯ ಅಂಗವಾಗಿ ಈ ಸಂದರ್ಭದಲ್ಲಿ ನಾಲ್ಕು ಸಾವಿರದ ೭೯೪ ಕೋಟಿ ರೂಪಾಯಿ ಮೌಲ್ಯದ ಮಾದಕ ದ್ರವ್ಯಗಳನ್ನು ನಾಶಪಡಿಸುವುದಾಗಿ ಗೃಹ ಸಚಿವರು ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ತಿಳಿಸಿದ್ದಾರೆ. 'ಏಕೀಕೃತ ಸಂಕಲ್ಪ, ಸಾಮೂಹಿಕ ಜವಾಬ್ದಾರಿ' ಎಂಬುದು ಮಾದಕ ದ್ರವ್ಯ ನಿಯಂತ್ರಣ ಸಂಸ್ಥೆ ಆಯೋಜಿಸುತ್ತಿರುವ ಈ ಸಮ್ಮೇಳನದ ಧ್ಯೇಯವಾಕ್ಯವಾಗಿದೆ.

**************

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿರತವಾಗಿ ಶ್ರಮಿಸುತ್ತಿದೆ.  ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ವಿಶೇಷ ಸರಣಿ - "ಸೇವಾ ಪರ್ವ" ದಲ್ಲಿಂದು, ಕೇಂದ್ರ ಸರ್ಕಾರ, ಭಾರತವನ್ನು ಜಾಗತಿಕ ಹವಾಮಾನ ಕ್ರಮದ ಮುಂಚೂಣಿಗೆ ಹೇಗೆ ಕೊಂಡೊಯ್ದಿದೆ ಎಂಬುದರ ಕುರಿತ ಒಂದು ವಿಶೇಷ ವರದಿ ಇಲ್ಲಿದೆ.

**ಧ್ವನಿ : ಅಕ್ಷಯ್ ( ೧ ನಿಮಿಷ, ೨೮ ಸೆಕೆಂಡುಗಳು)**

ಹೆಚ್ಚುತ್ತಿರುವ ಇಂಧನ ಅಗತ್ಯತೆಗಳೊಂದಿಗೆ ಅಭಿವೃದ್ಧಿಶೀಲ ರಾಷ್ಟ್ರವಾಗಿ ಹೊರಹೊಮ್ಮುತ್ತಿರುವ ಭಾರತ, ಜಾಗತಿಕ ಹವಾಮಾನ ಚಾಂಪಿಯನ್ ಆಗಿ ವೇಗವಾಗಿ ಮುನ್ನುಗುತ್ತಿದೆ. ಕಳೆದ ೧೧ ವರ್ಷಗಳಲ್ಲಿ, ಅರಣ್ಯಗಳನ್ನು ಸಂರಕ್ಷಿಸುವುದರಿಂದ ಹಿಡಿದು, ಹವಾಮಾನ ಪರಿವರ್ತನೆಯ ಕುರಿತು ಪ್ರತಿಪಾದಿಸುವವರೆಗೆ, ಸೌರ ಮೇಲ್ಛಾವಣಿಗಳಿಂದ, ಹಸಿರು ಸಂಚಾರದವರೆಗೆ, ಬೆಳವಣಿಗೆ ಮತ್ತು ಸುಸ್ಥಿರತೆ, ಜೊತೆಜೊತೆಯಾಗಿ ಸಾಗಬಹುದು ಎಂದು ಭಾರತ ಸಾಬೀತುಪಡಿಸುತ್ತಿದೆ. ಪ್ಯಾರಿಸ್‌ನಲ್ಲಿ ನಡೆದ ಕಾಪ್-೨೧ ನಲ್ಲಿ ಭಾರತ, ೨೦೩೦ ರ ವೇಳೆಗೆ ೪೦ ಪ್ರತಿಶತದಷ್ಟು ಶುದ್ಧ ಇಂಧನ ಸಾಮರ್ಥ್ಯವನ್ನು ಸಾಧಿಸುವುದಾಗಿ ಪ್ರತಿಜ್ಞೆ ಮಾಡಿತು. ತನ್ನ ಬದ್ಧತೆಯಿಂದಾಗಿ, ನಿಗದಿತ ಸಮಯಕ್ಕಿಂತ ಒಂಬತ್ತು ವರ್ಷಗಳ ಮುಂಚಿತವಾಗಿ, ಅಂದರೆ, ೨೦೨೧ ರಲ್ಲೇ ಈ ಗುರಿ ಸಾಧಿಸಿತು ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಅಮೆರಿಕಕ್ಕೆ ಭೇಟಿ ನೀಡಿದ್ದ ಪ್ರಧಾನಿ ನರೇಂದ್ರ ಮೋದಿ, ಭಾರತದ ಜನಸಂಖ್ಯೆ, ವಿಶ್ವದ ಶೇಕಡ ೧೭ ರಷ್ಟಿದೆ, ಆದರೆ ಅದರ ಇಂಗಾಲ ಹೊರಸೂಸುವಿಕೆ ಶೇಕಡ ೪ ಕ್ಕಿಂತಲೂ ಕಡಿಮೆಯಿದೆ ಎಂದು ಪ್ರತಿಪಾದಿಸಿದ್ದರು. ಇದಕ್ಕೆ ಪೂರಕವಾಗಿ ಭಾರತ, ದೈನಂದಿನ ಜೀವನದಲ್ಲಿ ಸರಳ, ಸುಸ್ಥಿರ ಆಯ್ಕೆಗಳನ್ನು ಅಳವಡಿಸಿಕೊಳ್ಳಲು ಕರೆ ನೀಡಿತು. ಬಾಕುನಲ್ಲಿ ನಡೆದ ಕಾಪ್-೨೯ ನಲ್ಲಿ, ಭಾರತ, ಹಸಿರು ಹೈಡ್ರೋಜನ್, ಕೈಗಾರಿಕಾ ಡಿಕಾರ್ಬೊನೈಸೇಶನ್ ಮತ್ತು ಮಹಿಳಾ ನೇತೃತ್ವದ ಹವಾಮಾನ ಕ್ರಮದಲ್ಲಿನ ಪ್ರಗತಿಯನ್ನು ಎತ್ತಿ ತೋರಿಸಿತು. ದಿಟ್ಟ ಬದ್ಧತೆ ಹಾಗೂ ಕಾರ್ಯತತ್ಪರತೆಯಿಂದಾಗಿ, ಭಾರತ, ಹವಾಮಾನ ಸಂರಕ್ಷಣೆಯಲ್ಲಿ ಜಾಗತಿಕವಾಗಿ ಮಾದರಿಯಾಗಿದೆ.

**************

ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಸುಪ್ರೀಂ ಕೋರ್ಟ್ ಕೊಲಿಜಿಯಂ, ನಿನ್ನೆ ನಡೆದ ಸಭೆಯಲ್ಲಿ ಕರ್ನಾಟಕ, ಮದ್ರಾಸ್ ಮತ್ತು ತ್ರಿಪುರ ಹೈಕೋರ್ಟ್‌ಗಳಿಗೆ ಖಾಯಂ ನ್ಯಾಯಮೂರ್ತಿಗಳನ್ನು ನೇಮಕ ಮಾಡಿಕೊಳ್ಳುವ ಶಿಫಾರಸು ಮಾಡಿದೆ. ಕರ್ನಾಟಕ ಹೈಕೋರ್ಟ್‌ನಲ್ಲಿ ಹೆಚ್ಚುವರಿ ನ್ಯಾಯಮೂರ್ತಿ ಆಗಿರುವ ನ್ಯಾಯಮೂರ್ತಿ ಕುರುಬರಹಳ್ಳಿ ವೆಂಕಟರಾಮರೆಡ್ಡಿ ಅರವಿಂದ್ ಅವರನ್ನು ಖಾಯಂ ನ್ಯಾಯಮೂರ್ತಿಯಾಗಿ ನೇಮಿಸಲು ಶಿಫಾರಸು ಮಾಡಲಾಗಿದೆ. ಮದ್ರಾಸ್ ಹೈಕೋರ್ಟ್‌ಗೆ, ಹೆಚ್ಚುವರಿ ನ್ಯಾಯಮೂರ್ತಿ ಆಗಿರುವ ನ್ಯಾಯಮೂರ್ತಿ ಎನ್. ಸೆಂತಿಲ್ ಕುಮಾರ್ ಮತ್ತು ನ್ಯಾಯಮೂರ್ತಿ ಜಿ. ಅರುಲ್ ಮುರುಗನ್‌ರ ನೇಮಕಕ್ಕೆ ಸಹಮತ ನೀಡಲಾಗಿದೆ. ತ್ರಿಪುರಾ ಹೈಕೋರ್ಟ್‌ನಲ್ಲಿ ಹೆಚ್ಚುವರಿ ನ್ಯಾಯಮೂರ್ತಿ ಆಗಿರುವ ನ್ಯಾಯಮೂರ್ತಿ ಬಿಸ್ವಜಿತ್ ಪಲಿತ್ ಅವರನ್ನು ಖಾಯಂ ನ್ಯಾಯಮೂರ್ತಿಯಾಗಿ ನೇಮಿಸಲು ಶಿಫಾರಸು ಮಾಡಲಾಗಿದೆ. ಗೀತಾ ಕಡಬ ಭರತರಾಜಾ ಸೆಟ್ಟಿ, ಮೂರಳಿಧರ ಪೈ ಬೋರ್ಕಟ್ಟೆ ಮತ್ತು ತ್ಯಾಗರಾಜ ನಾರಾಯಣ ಇನವಳ್ಳಿ ಅವರನ್ನು ಕರ್ನಾಟಕ ಹೈಕೋರ್ಟ್‌ಗೆ ನ್ಯಾಯಮೂರ್ತಿಗಳಾಗಿ ನೇಮಿಸುವ ಶಿಫಾರಸು ಕೂಡ ಮಾಡಲಾಗಿದೆ.

**************

೧೦ ಮತ್ತು ೧೨ ನೇ ತರಗತಿಯ ಬೋರ್ಡ್ ಪರೀಕ್ಷೆಗಳಿಗೆ ವಿದ್ಯಾರ್ಥಿಗಳು ಹಾಜರಾಗಲು ಶೇಕಡಾ ೭೫ ರಷ್ಟು ಹಾಜರಾತಿ ಕಡ್ಡಾಯವಾಗಿದೆ ಎಂದು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ ಸಿಬಿಎಸ್‌ಇ ತಿಳಿಸಿದೆ.

**************

ಅಂತಾರಾಷ್ಟ್ರೀಯ ಪರಮಾಣು ಇಂಧನ ಸಂಸ್ಥೆಯ ೬೯ ನೇ ಸಾಮಾನ್ಯ ಸಮ್ಮೇಳನ ವಿಯೆನ್ನಾದಲ್ಲಿ ನಡೆಯುತ್ತಿದ್ದು, ಪರಮಾಣು ಶಕ್ತಿ ಮತ್ತು ತಂತ್ರಜ್ಞಾನದ ಶಾಂತಿಯುತ ಬಳಕೆ ಮತ್ತು ಜಾಗತಿಕ ಪರಮಾಣು ಪ್ರಸರಣ ರಹಿತ ಆಡಳಿತವನ್ನು ರಕ್ಷಿಸುವ ತುರ್ತು ಅಗತ್ಯದ ಮೇಲೆ ಕೇಂದ್ರೀಕರಿಸಿದೆ.

**************

ಚೀನಾದಲ್ಲಿ ನಡೆದ ಸ್ಪೀಡ್ ಸ್ಕೇಟಿಂಗ್ ವಿಶ್ವ ಚಾಂಪಿಯನ್‌ಶಿಪ್‌ನ ಪುರುಷರ ಸಾವಿರ ಮೀಟರ್ ಸ್ಪ್ರಿಂಟ್ ಸ್ಪರ್ಧೆಯಲ್ಲಿ, ಚಿನ್ನದ ಪದಕ ಗೆದ್ದ ಆನಂದಕುಮಾರ್ ವೇಲ್‌ಕುಮಾರ್ ಅವರನ್ನು ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ, ಆನಂದಕುಮಾರ್ ವೇಲ್‌ಕುಮಾರ್ ಅವರ ಧೈರ್ಯ, ವೇಗ ಮತ್ತು ಚೈತನ್ಯ, ಅವರನ್ನು ಸ್ಕೇಟಿಂಗ್‌ನಲ್ಲಿ ಭಾರತದ ಮೊದಲ ವಿಶ್ವ ಚಾಂಪಿಯನ್ ಆಗಿ ಮಾಡಿದೆ, ಅವರ ಸಾಧನೆ, ಅಸಂಖ್ಯಾತ ಯುವಕರಿಗೆ ಸ್ಫೂರ್ತಿ ನೀಡುತ್ತದೆ ಎಂದು ತಿಳಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡ ಆನಂದಕುಮಾರ್ ವೇಲ್‌ಕುಮಾರ್ ಅಭಿನಂದನೆ ತಿಳಿಸಿದ್ದಾರೆ. ಫಿಡೆ ಮಹಿಳಾ ಗ್ರ್ಯಾಂಡ್ ಸ್ವಿಸ್ ೨೦೨೫ ಗೆದ್ದ ವೈಶಾಲಿ ರಮೇಶ್ ಬಾಬು ಅವರನ್ನೂ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಭಿನಂದಿಸಿದ್ದಾರೆ.

**************